ವಿದ್ಯುತ್ ವಿತರಣಾ ಉಪಕೇಂದ್ರ ಸ್ಥಗಿತಗೊಂಡಿರುವುದು

556 (456) ಶ್ರೀ ಕುಮಾರಸ್ವಾಮಿ ಎಚ್. ಕೆ. (ಸಕಲೇಶಪುರ) :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕು ಹೆತ್ತೂರು ಗ್ರಾಮಕ್ಕೆ ಈ ಹಿಂದೆ ವಿದ್ಯುತ್ ವಿತರಣಾ ಉಪಕೇಂದ್ರ ಮಂಜೂರಾಗಿ ಸ್ಥಗಿತ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಉದ್ದೇಶಕ್ಕಾಗಿ ಈಗಾಗಲೇ ಜಾಗ ಮಂಜೂರಾಗಿ ಸ್ವಾಧೀನ ಪಡಿಸಿಕೊಂಡಿರುವುದು ನಿಜವೇ ;

(ಆ) ಎಂದಿನಿಂದ ಈ ಕೇಂದ್ರವನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :–

(ಅ)ಮತ್ತು(ಆ) ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಹೆತ್ತೂರು ಗ್ರಾಮಕ್ಕೆ 66/11 ಕೆ.ವಿ. ವಿದ್ಯುತ್ ಉಪಕೇಂದ್ರವು ಮಂಜೂರಾಗಿರುತ್ತದೆ. ಸದರಿ ವಿದ್ಯುತ್ ಉಪಕೇಂದ್ರದ ಸ್ಥಾಪನೆಯ ಉದ್ದೇಶಕ್ಕಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಒಟ್ಟು 2 ಎಕರೆ 20 ಗುಂಟೆ ಜಮೀನನ್ನು ಖರೀದಿಸಿರುತ್ತದೆ.

ಪ್ರಸ್ತುತ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನಲ್ಲಿ ಸಕಲೇಶಪುರ, ಯಸಳೂರು, ಹಾನಬಾಳು ಮತ್ತು ಬಾಳುಪೇಟೆಗಳಲ್ಲಿ – 4 ಸಂಖ್ಯೆಗಳ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಸಕಲೇಶಪುರ ತಾಲ್ಲೂಕಿನ ಹೆತ್ತೂರು ಗ್ರಾಮಕ್ಕೆ ಅಂದಾಜು 12 ಕಿ.ಮೀ. ದೂರದಲ್ಲಿರುವ ಯಸಳೂರು ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜಾಗುತ್ತಿದೆ. ಯಸಳೂರಿನ ಸಬ್‌ಸ್ಟೇಷನ್ 6.3 ಎಂ.ವಿ.ಎ ಸಾಮರ್ಥ್ಯದ ಒಂದು ಟ್ರಾನ್ಸ್‌ಫಾರ್ಮರ್ ಹೊಂದಿದ್ದು, ಈ ಸ್ಟೇಷನ್ನಿನ 2012–13ನೇ ಸಾಲಿನ ಪೀಕ್ ಲೋಡ್ 1.95 ಮೆ.ವ್ಯಾ. ನಷ್ಟಿದ್ದು, ಟ್ರಾನ್ಸ್‌ಫಾರ್ಮರ್‌ಗೆ ಶೇಕಡ 36 ಮಾತ್ರ ಲೋಡ್ ಇದೆ.

ಸಕಲೇಶಪುರ ತಾಲ್ಲೂಕಿನ ಹಾನಬಾಳುವಿನಲ್ಲಿ 66/11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ದಿನಾಂಕ: 27–02–2008 ರಂದು ಹಾಗೂ ಬಾಳುಪೇಟೆಯಲ್ಲಿ 66/11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ದಿನಾಂಕ: 31–03–2008 ರಂದು ಚಾಲನೆಗೊಳಿಸಲಾಗಿರುತ್ತದೆ.

ಸಕಲೇಶಪುರ ತಾಲ್ಲೂಕಿನ ಹೆತ್ತೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಕ್ಕೆ ಅಗತ್ಯವಿರುವ ಜಮೀನನ್ನು ಸ್ವಾಧೀನ ಪಡಿಸಿಕೊಂಡಿದ್ದರೂ ಸಹಾ, ಮೇಲಿನ ಅಂಶಗಳನ್ನು ಗಮನಿಸಿ, ಮುಂದಿನ ವರ್ಷಗಳಲ್ಲಿ ವಿದ್ಯುತ್ ಬೇಡಿಕೆಯಲ್ಲಿ

ಉಂಟಾಗಬಹುದಾದ ಹೆಚ್ಚಳವನ್ನು ಆಧರಿಸಿ, ಹೆತ್ತೂರಿನಲ್ಲಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಬಗ್ಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಚಾರಿ ಪೊಲೀಸ್ ಠಾಣೆಗಳು

525 (707) ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ) :– ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಯಾದಗಿರಿ ಜಿಲ್ಲಾ ಕೇಂದ್ರವಾಗಿ 3 ವರ್ಷಗಳೇ ಆದರೂ ಜಿಲ್ಲಾ ಕೇಂದ್ರದಲ್ಲಿ ಸಂಚಾರಿ ಪೊಲೀಸರು ಇಲ್ಲದೆ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಂಚಾರಿ ಪೊಲೀಸ್ ಠಾಣೆ ಸ್ಥಾಪನೆಗೆ ಸರ್ಕಾರವು ಇದುವರೆಗೂ ಕ್ರಮ ಕೈಗೊಂಡಿಲ್ಲದಿರುವುದಕ್ಕೆ ಕಾರಣಗಳೇನು ;

(ಇ) ಸಂಚಾರಿ ಪೊಲೀಸ್ ಠಾಣೆ ಸ್ಥಾಪನೆಗೆ ಸ್ಥಳೀಯ ಪೊಲೀಸ್ ವರಿಷ್ಠಾಧಿಕಾರಿಗಳು ಸಲ್ಲಿಸಿದ ಪ್ರಸ್ತಾವನೆ ಕುರಿತಂತೆ ಯಾವ ಹಂತದಲ್ಲಿದೆ ;

(ಈ) ಸಂಚಾರಿ ದಟ್ಟಣೆಯಿಂದ ವಾಹನ ಸವಾರರು ಮತ್ತು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಸ್ಥಳೀಯ ಪೊಲೀಸರನ್ನೇ ಬಳಕೆ ಮಾಡುತ್ತಿರುವುದರಿಂದ ಪೊಲೀಸರ ಕೊರತೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಕೆ. ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು) :–

(ಅ) ಹೌದು.

(ಆ)ಮತ್ತು (ಇ) ಆಯವ್ಯಯದಲ್ಲಿ ಕಲ್ಪಿಸಿರುವ ಅನುದಾನದ ಲಭ್ಯತೆಯ ಮೇಲೆ ಪ್ರತಿ ವರ್ಷ ಹಂತ ಹಂತವಾಗಿ ಪೊಲೀಸ್ ಠಾಣೆಗಳನ್ನು ಮಂಜೂರು ಮಾಡಲಾಗುತ್ತಿದೆ.

2013–14ನೇ ಸಾಲಿನ ಆಯವ್ಯಯದಲ್ಲಿ ಹೊಸ ಪೊಲೀಸ್ ಠಾಣೆಗಳನ್ನು ತೆರೆಯಲು ಕಲ್ಪಿಸಿರುವ ಅನುದಾನದ ಲಭ್ಯತೆ ಹಾಗೂ ಆದ್ಯತೆಯ ಅನುಗುಣವಾಗಿ ಹೊಸ ಪೊಲೀಸ್ ಠಾಣೆಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

(ಈ) ಯಾದಗಿರಿ ನಗರ ಪೊಲೀಸ್ ಠಾಣೆ ಹಾಗೂ ಯಾದಗಿರಿ ಗ್ರಾಮೀಣ ಪೊಲೀಸ್ ಠಾಣೆಯ ಸಿಬ್ಬಂದಿಗಳನ್ನು ಉಪಯೋಗಿಸಿಕೊಂಡು ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಸಂಚಾರ ನಿಯಂತ್ರಣವನ್ನು ನಿರ್ವಹಿಸಲಾಗುತ್ತಿದೆ.